# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಹಂಚಿಕೆಯಾಗಿರುವ 6.00 ಮೆಗಾ ವ್ಯಾಟ್ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 12.6 ಮೆಗಾ ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.**

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 210 ಎನ್‌ಸಿಇ 2005 ದಿನಾಂಕ: 20.8.2005.
2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 463 ಎನ್‌ಸಿಇ 2006 ದಿನಾಂಕ: 22.12.2006.
3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: KRED/08/VWTIPL-(6 MW to 21.6 MW)/2011/3011 ದಿನಾಂಕ: 26/28.9.2011 ಮತ್ತು KRED/08/VWTIPL(6 MW to 21.6 MW)/2012/1898 ದಿನಾಂಕ: 05.7.2012.
4) ದಿನಾಂಕ 07.07.2012 ರಂದು ನಡೆದ ಹಂಚಿಕೆ ಸಮಿತಿ ನಡವಳಿ.

* * *

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಎನ್.ಇ.ಜಿ. ಮೈಕಾನ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಾಗಲಕೋಟೆ, ರಾಯಚೂರು, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ 99.75 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಎನ್.ಇ.ಜಿ. ಮೈಕಾನ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಕಂಪನಿಯ ಹೆಸರನ್ನು ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಎಂದು ಬದಲಾಯಿಸಿ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು, ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಕಂಪನಿಯವರಿಗೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಸೂಚಿಸಿರುವ ಆದೇಶದಲ್ಲಿ ಹಂಚಿಕೆಯಾಗಿರುವ ಸಾಮರ್ಥ್ಯದಲ್ಲಿ ರಾಯಚೂರು ಜಿಲ್ಲೆಯ ಗಾಜಲಗಟ್ಟ, ಕೋಟೆಕಾಲ್ ಗ್ರಾಮಗಳಲ್ಲಿ ಮಂಜೂರಾಗಿರುವ ಅಂಶಿಕ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 21.6 ಮೆಗಾ ವ್ಯಾಟ್‌ಗೆ ಹೆಚ್ಚಿಸುವಂತೆ ಮತ್ತು ಸದರಿ ಯೋಜನೆಯನ್ನು ಅರಣ್ಯ, ಕಂದಾಯ ಮತ್ತು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸಲಾಗುವುದೆಂದು ತಿಳಿಸಿ ದಿನಾಂಕ 28.9.2011ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಆನಂತರ 05.7.2012ರ ಪತ್ರದಲ್ಲಿ ಯೋಜನೆಯು ಒಟ್ಟಾರೆ ಜಮೀನಿನಲ್ಲಿ 35.20 ಎಕರೆ ಅರಣ್ಯ ಭೂಮಿಯಲ್ಲಿ 9 ಮೆ.ವ್ಯಾ. ಸಾಮರ್ಥ್ಯ ಹಾಗೂ 32.62 ಎಕರೆ ಸರ್ಕಾರಿ ಜಮೀನಿನಲ್ಲಿ 10.80 ಮೆ.ವ್ಯಾ. ಮತ್ತು 10.66 ಎಕರೆ ಖಾಸಗಿ ಜಮೀನಿನಲ್ಲಿ 1.8 ಮೆ.ವ್ಯಾ. ಸಾಮರ್ಥ್ಯವನ್ನು ಒಳಗೊಂಡಿದ್ದು, ಅರಣ್ಯ ಇಲಾಖೆಯ 35.20 ಎಕರೆ ಜಮೀನಿನಲ್ಲಿ ಬರುವ 9 ಮೆ.ವ್ಯಾ. ಸಾಮರ್ಥ್ಯ ಹೊರತುಪಡಿಸಿ ಖಾಸಗಿ ಮತ್ತು ಸರ್ಕಾರಿ ಜಮೀನಿನಲ್ಲಿ ಬರುವ ಸಾಮರ್ಥ್ಯ ಹೆಚ್ಚಳವನ್ನು ಪರಿಗಣಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ದಿನಾಂಕ :07.07.2012ರಂದು ನಡೆದ ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ : ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರು ಅರಣ್ಯ ಇಲಾಖೆಯ 35.20 ಎಕರೆ ಜಮೀನಿನಲ್ಲಿ ಬರುವ 9.00 ಮೆ.ವ್ಯಾ. ಸಾಮರ್ಥ್ಯವನ್ನು ಹೊರತು ಪಡಿಸಿ ಕಂದಾಯ ಮತ್ತು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸಲಿರುವ ಯೋಜನೆಗಳ ಸಾಮರ್ಥ್ಯವನ್ನು 12.6 ಮೆ.ವ್ಯಾಗೆ ಹೆಚ್ಚಿಸಲು ಸಮಿತಿಯು ಶಿಫಾರಸ್ಸಿಸಿದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 387 ಎನ್‌ಸಿಇ 2011,**
**ಬೆಂಗಳೂರು, ದಿನಾಂಕ: 08.08.2012.**

ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ರಾಯಚೂರು ಜಿಲ್ಲೆಯ ಗಾಜಲಗಟ್ಟ ಮತ್ತು ಕೋಟೆಕಾಲ್ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 12.6 ಮೆಗಾ ವ್ಯಾಟ್ ಸಾಮರ್ಥ್ಯಕ್ಕೆ (ಅರಣ್ಯ ಇಲಾಖೆಯ 35.20 ಎಕರೆ ಜಮೀನಿನಲ್ಲಿ ಬರುವ 9.00 ಮೆ.ವ್ಯಾ. ಸಾಮರ್ಥ್ಯವನ್ನು ಹೊರತು ಪಡಿಸಿ, 32.62 ಎಕರೆ ಸರ್ಕಾರಿ ಜಮೀನಿನಲ್ಲಿ ಅನುಷ್ಠಾನಗೊಳಿಸಲಿರುವ 10.80 ಮೆ.ವ್ಯಾ. ಸಾಮರ್ಥ್ಯ ಮತ್ತು 10.66 ಎಕರೆ ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸಲಿರುವ 1.8 ಮೆ.ವ್ಯಾ. ಸಾಮರ್ಥ್ಯ) ಈ ಕೆಳಗೆ ವಿವರಿಸಿರುವಂತೆ ಮತ್ತು ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಿದೆ.

..........2)

| Sl No. | WTG No. | District | Taluk | Village | Survey No. | Extent (Acres) |
|---|---|---|---|---|---|---|
| **REVENUE LAND** | | | | | | |
| 1 | P30 | Raichur | Manvi | Yatgal | 49 | 5.81 |
| 2 | P29 | Raichur | Manvi | Yatgal | 25/2 | 4.99 |
| 3 | P24, P25, P26 | Raichur | Manvi | Yatgal | 25/1 | 16.06 |
| 4 | P28 | Raichur | Lingsugur | Gajalagatti | 36 | 5.76 |
| | TOTAL | | | | | 32.62 |
| **PRIVATE LAND** | | | | | | |
| 1 | P27 | Raichur | Manvi | Kutekal | 113 | 4.33 |
| 2 | | | | Yatgal | 85 | 1.30 |
| 3 | | | | Gajalagatti | 29 | 0.72 |
| 4 | | | | Kutekal | 122 | 0.63 |
| 5 | | | | Kutekal | 123 | 1.39 |
| 6 | | | | Yatgal | 74 | 0.49 |
| 7 | | | | Kutekal | 8(2) | 0.03 |
| 8 | | | | Kutekal | 8(1) | 0.46 |
| 9 | | | | Kutekal | 114 | 1.04 |
| 10 | | | | Kutekal | 9(1) | 0.05 |
| 11 | | | | Kutekal | 11 | 0.24 |
| | TOTAL | | | | | 10.66 |

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

2. ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್) ಪರಿಷ್ಕರಿಸಲು ಮೆಗಾ ವ್ಯಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣ ಶುಲ್ಕವನ್ನು ತುಂಬುವುದು.

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಯನ್ನು ಒಂದು ವರ್ಷದಲ್ಲಿ ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ತ್ರಿಪ್ರತಿಗಳಲ್ಲಿ ಸಲ್ಲಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ ನಿಂದ 300 ಕಿ.ವ್ಯಾ | 18 | 1 |
| > 300 ಕಿ.ವ್ಯಾ ನಿಂದ 500 ಕಿ.ವ್ಯಾ | 15 | 1 |
| > 500 ಕಿ.ವ್ಯಾ ನಿಂದ 750 ಕಿ.ವ್ಯಾ | 12 | 1 |
| > 750 ಕಿ.ವ್ಯಾ ನಿಂದ 1000 ಕಿ.ವ್ಯಾ | 8 ರಿಂದ 10 | 1 |

..........3)

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ವರ್ಕ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಶಾಸನಬದ್ಧ ಅನುಮೋದನೆ ಅವಶ್ಯಕತೆ ಇರುವ ಇಲಾಖೆ/ನಿಗಮಗಳಿಂದ ಅಂದರೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ, ಜಲಸಂಪನ್ಮೂಲ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ, ಕಂದಾಯ ಇಲಾಖೆ ಮತ್ತು ಇತರೆ ಸಂಬಂಧಿಸಿದ ಇಲಾಖೆಗಳ ಕ್ಲಿಯರೆನ್ಸ್‌ಗಳನ್ನು ಈ ಹೆಚ್ಚುವರಿ ಸಾಮರ್ಥ್ಯಕ್ಕೂ ಸಹ ಪಡೆಯತಕ್ಕದ್ದು.

7. ಅಭಿವೃದ್ಧಿದಾರರು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೌಸಲ್ಯಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಯಚೂರು ಜಿಲ್ಲೆ, ರಾಯಚೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾರ್ ಹೋಟೆಲ್ ಎದುರುಗಡೆ, ಗುಲ್ಬರ್ಗಾ-585 102.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
10. ಮೆ॥ ವೆಸ್ಟಾಸ್ ಎಂಡ್ ಟೆಕ್ನಾಲಜಿಇಂಡಿಯಾ ಪ್ರೈವೇಟ್ ಲಿಮಿಟೆಡ್, ನಂ 33, 'ಸ್ವಯಂಪ್ರಭೆ' ಅಮೇರಿಕನ್ ಕಾಲೋನಿ, ನಾರ್ತ್ ಪಾರ್ಕ್ ರಸ್ತೆ, ಕುಮಾರ ಪಾರ್ಕ್ ಪೂರ್ವ, ಬೆಂಗಳೂರು – 560 001.
11. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.